# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ತೇರಗಾಂವ, ಕಾವಲವಾಡ ಮತ್ತು 91 ಗ್ರಾಮಗಳಿಗೆ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂ:ಗ್ರಾಕುಅಪ 88 ಗ್ರಾನೀಸ(5)17 ಬೆಂಗಳೂರು, ದಿನಾಂಕ:06.12.2017
2. ದಿನಾಂಕ:17.05.2019ರ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ (TAA) ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಕಡತ ಸಂ:RDP 165 RDWSD 2019-20.

---

**ಪ್ರೀಠಿಕೆ:**

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ತೇರಗಾಂವ, ಕಾವಲವಾಡ ಮತ್ತು 91 ಗ್ರಾಮಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ರೂ.10252.00ಲಕ್ಷ ಅಂದಾಜಿನ DBOT ಆಧಾರಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಉದ್ದೇಶಿತ ಯೋಜನೆಯ ಅಂದಾಜನ್ನು ಹಿಂದಿನ ಸಾಲುಗಳ ದರಗಳನ್ವಯ (SR) ತಯಾರಿಸಲಾಗಿದ್ದು, ಪ್ರಸ್ತುತ ಲೋಕೋಪಯೋಗಿ ಇಲಾಖೆ ಹಾಗೂ KUWS&DB ಸಂಸ್ಥೆಗಳು 2018-19ನೇ ಸಾಲಿನ ದರಪಟ್ಟಿಗಳನ್ನು ಪ್ರಕಟಿಸಿರುವುದಾಗಿದೆ ಹಾಗೂ PSR ತಯಾರಿಸುವಾಗ, ನೂತನವಾಗಿ ನಿರ್ಮಿಸಬೇಕಾದ 66 OHTಗಳು, ದುರಸ್ತಿಗೊಳಿಸುವ 61 OHTಗಳು, ನೆಲಸಮ ಮಾಡಲಾಗುವ 4 OHTಗಳು ಮತ್ತು DG Pumpsetಗಳು ಸೇರಿರಲಿಲ್ಲ. ಈ Itemಗಳು ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಮತ್ತು ಮುಂದಿನ ದಿನಗಳಲ್ಲಿ ಗೃಹ ಸಂಪರ್ಕ ಕಲ್ಪಿಸುವ ಅವಶ್ಯಕವಾಗಿದೆ. ಆದ್ದರಿಂದ ಇವುಗಳ ಮೊತ್ತ ರೂ.599.00ಲಕ್ಷಗಳನ್ನು CSRನಲ್ಲಿ ಸೇರಿಸಲಾಗಿದೆ. ಅದರನ್ವಯ CSR ಮೊತ್ತವು ಸೇರಿ ಯೋಜನೆಯ ಪರಿಷ್ಕೃತ ಅಂದಾಜು (ಇಡಿಗಂಟು - Lumpsum ಸೇರಿ) ಮೊತ್ತ ರೂ.11936.00ಲಕ್ಷಗಳಾಗುತ್ತಿದ್ದು, ಈ ಪರಿಷ್ಕೃತ ಅಂದಾಜಿಗೆ ಅನುಮೋದನೆ ನೀಡುವಂತೆ CE,RDWSD ರವರು ಕೋರಿರುತ್ತಾರೆ. ನಿಯಮಾನುಸಾರ ಉತ್ತರ ಕನ್ನಡ ಜಿಲ್ಲಾ ಪಂಚಾಯತಿ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 29 ಗ್ರಾನೀಸ(5)2019 ಬೆಂಗಳೂರು, ದಿನಾಂಕ:03.06.2019.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ತೇರಗಾಂವ, ಕಾವಲವಾಡ ಮತ್ತು 91 ಗ್ರಾಮಗಳಿಗೆ DBOT ಆಧಾರದ ಮೇಲೆ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ



"Attested"

EXECUTIVE ENGINEER
RURAL DRINKING WATER AND
SANITATION DIVISION
KARWAR (U.K.)

ಬಾಬ್ತು ಸೇರಿದಂತೆ ಪರಿಷ್ಕೃತ ಅಂದಾಜು ರೂ.11936.00ಲಕ್ಷ (ಹನ್ನೊಂದು ಸಾವಿರದ ಒಂಭತ್ತು ನೂರ ಮೂವತ್ತು ಆರು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ NRDWP (C&Q)ಗಳಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

a) ಈ ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

b) ಈ ಯೋಜನೆಯ DBOT ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

c) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

d) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

e) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆ ನಿರ್ವಹಿಸತಕ್ಕದ್ದು.

f) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 85 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

g) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್‌ಗೆ CE-RDWSD ಹಂತದಲ್ಲಿರುವ DBOT ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

h) ಈ ಯೋಜನೆಯ ಕಾಮಗಾರಿಯನ್ನು 24 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶವೀಯಕೂಡದು. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

i) ಯೋಜನಾ ಅಂದಾಜು ಮೊತ್ತದ ಕನಿಷ್ಠ 10%ನ್ನು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ O&M ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಗುತ್ತಿಗೆದಾರರಿಗೆ ಪಾವತಿಸಬೇಕು.

"Attested"

EXECUTIVE ENGINEER
RURAL DRINKING WATER AND
SANITATION DIVISION
KARWAR (U.K.)

j) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು PMC ವರದಿ ಆಧರಿಸಿ ಅನುಮೋದಿತ ToR ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ CE-RDWSD ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

k) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

l) ಮೇಲ್ಕಂಡ ಅನುಮೋದಿತ ಮೊತ್ತ ಗುತ್ತಿಗೆದಾರರು ಸಲ್ಲಿಸುವ ವಿನ್ಯಾಸವನ್ನು ತಾಂತ್ರಿಕ ಸಮಿತಿ ದೃಢೀಕರಿಸುವ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ MoU/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಯೋಜನೆಯ ಅನುಷ್ಠಾನ ಕುರಿತು CE/RDWSD ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ದಿನಾಂಕ:20.05.2019ರ ಸಹಮತಿಯನ್ವಯ ಹೊರಡಿಸಲಾಗಿದೆ.

"Attested"

EXECUTIVE ENGINEER
RURAL DRINKING WATER AND
SANITATION DIVISION
KARWAR (U.K.)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

<u>ಪ್ರತಿಗಳು:</u>

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಅಧ್ಯಕ್ಷರು, ಜಿಲ್ಲಾ ಪಂಚಾಯತ್.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
7. ನಿರ್ದೇಶಕರು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.ನೈ. ವೃತ್ತ, ಬೆಳಗಾವಿ.
9. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
10. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
11. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.ನೈ. ವಿಭಾಗ, ಉತ್ತರ ಕನ್ನಡ
12. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
13. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.